






ದಿನಾಂಕ:25-08-23 ರಂದು ಬೆಂಗಳೂರಿನ ಪೀಣ್ಯದಲ್ಲಿರುವ ಇಸ್ರೋ ಕಂಟ್ರೋಲ್ ರೂಮಿಗೆ ಭೇಟಿ ನೀಡಿ, ಚಂದ್ರಯಾನ -3 ಮಿಷನ್ ಯಶಸ್ವಿ ವಿಜ್ಞಾನಿಗಳ ತಂಡಕ್ಕೆ ಸನ್ಮಾನಿಸಿ ಮಾತನಾಡಿದ  ಮಾನ್ಯ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಚಂದ್ರನ ಮೇಲೆ ಬಾಹ್ಯಾಕಾಶ ನೌಕೆ ಇಳಿಸುವುದು ಸಣ್ಣ ವಿಷಯವಲ್ಲ. ಇಂದು ಇಡೀ ಜಗತ್ತು ಭಾರತದತ್ತ ಅಚ್ಚರಿಯಿಂದ ನೋಡುವ  ಕೆಲಸವನ್ನು ನಮ್ಮ ವಿಜ್ಞಾನಿಗಳು ಮಾಡಿದ್ದಾರೆ. ಇಸ್ರೋ ವಿಜ್ಞಾನಿಗಳ ಸಾಧನೆ ಭಾರತ ಪಾಲಿಗೆ ಐತಿಹಾಸಿಕವಾದದ್ದು ಹೀಗಾಗಿ ಅವರಿಗೆ ಎಷ್ಟು ಗೌರವ ಸಲ್ಲಿಸಿದರೂ ಕಡಿಮೆಯೇ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ವಿಜ್ಞಾನಿಗಳ ಸಾಧನೆ ಕುರಿತು ಬಣ್ಣಿಸಿದರು.